**ಕರ್ನಾಟಕ ಸರ್ಕಾರ**

ಸಂಖ್ಯೆ: ಕಪಂರಾಅ/ಅಭಿವೃದ್ಧಿ/652/2022

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:28.12.2022.

## ಸುತ್ತೋಲೆ

ವಿಷಯ:- ರಾಜ್ಯದ 330 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸುವ ಮಾರ್ಗಸೂಚಿಗಳ ಕುರಿತು.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ:KPRC-DEV/544/2021, ದಿನಾಂಕ:19.12.2022
2. ಸರ್ಕಾರದ ಸೇರ್ಪಡೆ ಮಾರ್ಗಸೂಚಿ ಸಂಖ್ಯೆ:ಗ್ರಾಅಪಂರಾ/191/ಜಿಪಸ/2020, ದಿನಾಂಕ:05.10.2020.
3. ಈ ಕಛೇರಿಯ ಪತ್ರ ಸಂಖ್ಯೆ:ಕಪಂರಾಅ/ಅಭಿವೃದ್ಧಿ/78/2020, ದಿನಾಂಕ:03.11.2020.
4. ಈ ಕಛೇರಿಯ ಪತ್ರ ಸಂಖ್ಯೆ:ಕಪಂರಾಅ/ಅಭಿವೃದ್ಧಿ/85/2020, ದಿನಾಂಕ:07.11.2020.
5. ಈ ಕಛೇರಿಯ ಪತ್ರ ಸಂಖ್ಯೆ:ಕಪಂರಾಅ/ಪಂ.ರಾಜ್/175/2020, ದಿನಾಂಕ:08.01.2021.
6. ಈ ಕಛೇರಿಯ ಪತ್ರ ಸಂಖ್ಯೆ:ಕಪಂರಾಅ/ಅಭಿವೃದ್ಧಿ/14/2021, ದಿನಾಂಕ:01.02.2021.
7. ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಪಿ.ಆರ್.62 ಜಿ.ಪಿ.ಎಸ್.2020, ದಿನಾಂಕ: 27.08.2021.
8. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ/238/ಜಿಪಸ/2021, ದಿನಾಂಕ:28.05.2021.
9. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ/244/ಜಿಪಸ/2021, ದಿನಾಂಕ:02.06.2021.
10. ಸರ್ಕಾರದ ಸುತ್ತೋಲೆ ಸಂಖ್ಯೆಗ್ರಾಅಪ 769 ಗ್ರಾಪಂಅ 2020, ದಿನಾಂಕ15.07.2021
11. ಸರ್ಕಾರದ ಮಾರ್ಗಸೂಚಿ ಸಂಖ್ಯೆ:ಗ್ರಾಅಪಂರಾ/300/ಜಿಪಸ/2022,ದಿನಾಂಕ: 01.07.2022
12. ಕರ್ನಾಟಕ ಸರ್ಕಾರ ಅಧಿಸೂಚನೆ ಸಂಖ್ಯೆ:RDPR/156/GPA/20222(ಇ), ದಿನಾಂಕ:14.11.2022.

***

ಸರ್ಕಾರದ ಆದೇಶದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ 5,633 ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳಿಗೆ ದಿನಾಂಕ:01.03.2019 ರಿಂದ ಜಾರಿಗೆ ಬರುವಂತೆ ವರ್ಗಾಯಿಸಲಾಗಿರುತ್ತದೆ. ಸದರಿ ಆದೇಶದಲ್ಲಿ ಅನುದಾನವನ್ನು ಒಳಗೊಂಡಂತೆ ಹಾಗೂ ಗ್ರಾಮ ಪಂಚಾಯಿತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಬಳಸಬೇಕೆಂದು ತಿಳಿಸಿರುತ್ತದೆ.

ರಾಜ್ಯದಲ್ಲಿ ಪ್ರಸ್ತುತ 5954 ಗ್ರಾಮ ಪಂಚಾಯಿತಿಗಳಿದ್ದು, 5575 ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರದ ಉಲ್ಲೇಖ(1)ರ ಆದೇಶದಲ್ಲಿ 330 ಹೊಸ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಿರುತ್ತದೆ. ಮಂಜೂರಾತಿ ದೊರೆತಿರುವ ಗ್ರಾಮ ಪಂಚಾಯಿತಿಗಳಲ್ಲಿ ಗ್ರಂಥಾಲಯಗಳನ್ನು ಪ್ರಾರಂಭಿಸಲು ಕ್ರಮವಹಿಸಬೇಕಾಗಿರುತ್ತದೆ.

ಅದರಂತೆ, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು 330 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಲು ಈ ಕೆಳಕಂಡಂತಹ ಆದ್ಯತೆಯ ಮಾನದಂಡಗಳನ್ವಯ ಕ್ರಮವಹಿಸುವುದು.

**ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಕ್ಕೆ ಕಟ್ಟಡ ಮೂಲಭೂತ ಸೌಕರ್ಯ, ಪೀಠೋಪಕರಣಗಳು ಮತ್ತು ಪರಿಕರಗಳನ್ನು ಒದಗಿಸುವುದು.**

ಗ್ರಾಮ ಪಂಚಾಯಿತಿಯ ಸ್ವಂತ ಕಟ್ಟಡ /ಸಮುದಾಯ ಭವನ/ಖಾಲಿ ಇರುವ ಸರ್ಕಾರಿ ಕಟ್ಟಡ/ಶಾಲಾ ಆವರಣದಲ್ಲಿ ಖಾಲಿ ಇರುವ ಕಟ್ಟಡವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನಾಗಿ ಗುರುತಿಸಿ, ಸದರಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಸಂಪರ್ಕ, ವಿಶೇಷಚೇತನರಿಗಾಗಿ RAMP ಮತ್ತು ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮವಹಿಸುವುದು. ಈ ಗ್ರಂಥಾಲಯಗಳಿಗೆ ವಂತಿಗೆ/ದೇಣಿಗೆ ನೀಡಿದವರನ್ನು ಗುರುತಿಸಿ ಅವರಿಂದ ಪುಸ್ತಕ ಜೋಳಿಗೆ ಕಾರ್ಯಕ್ರಮ ಹಮ್ಮಿಕೊಂಡು ಪುಸ್ತಕಗಳನ್ನು ಸಂಗ್ರಹಿಸುವುದು. ಗ್ರಾಮ ಪಂಚಾಯಿತಿಯ ಪುಸ್ತಕಗಳ ಖರೀದಿ ಹಾಗೂ ಇತರೆ ಕಾರ್ಯಕ್ರಮಗಳನ್ನು ಕೈಗೊಳ್ಳಲು ವಿವರಗಳನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯು ಅನುಸರಿಸುವಂತೆ KTPP ನಿಯಮಗಳನುಸಾರ ಖರೀದಿಸುವುದು. ಈ ಕಾರ್ಯಗಳಿಗೆ ರಾಜ್ಯ ಹಣಕಾಸು ಆಯೋಗದ ಜಿಲ್ಲಾ ಪಂಚಾಯಿತಿ/ತಾಲ್ಲೂಕು ಪಂಚಾಯಿತಿಯ ಅನಿರ್ಬಂಧಿತ ಅನುದಾನ ಹಾಗೂ ಜಿಲ್ಲಾ ಪಂಚಾಯಿತಿ/ತಾಲ್ಲೂಕು ಪಂಚಾಯಿತಿ ಗ್ರಾಮ ಪಂಚಾಯಿತಿಗಳ 15ನೇ ಹಣಕಾಸು ಆಯೋಗದ ಅನಿರ್ಬಂಧಿತ ಅನುದಾನದಡಿ ಲಭ್ಯವಿರುವ ಹಣವನ್ನು ಬಳಸಿಕೊಳ್ಳಲು ತಿಳಿಸಿದೆ (ಅನುಬಂಧದಲ್ಲಿ ಲಗತ್ತಿಸಿದೆ). ಗ್ರಾಮ ಪಂಚಾಯತಿ ಸ್ವಂತ ಸಂಪನ್ಮೂಲ ಹಣದಿಂದ ದುರಸ್ತಿಗೊಳಿಸಲು/ನವೀಕರಿಸಲು ಕ್ರಮವಹಿಸುವ ಬಗ್ಗೆ ಉಲ್ಲೇ(2),(8),(9) ಮತ್ತು (11)ರಲ್ಲಿ ತಿಳಿಸಲಾಗಿದೆ.

ಉಲ್ಲೇಖ(4) ಮತ್ತು(5)ರಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಡಿಜಿಟಲೀಕರಣಗೊಳಿಸಲು ಅನುಸರಿಸಬೇಕಾದ ಕ್ರಮಗಳ ಕುರಿತು ಅನುಬಂಧದಲ್ಲಿ ವಿವರಿಸಲಾಗಿದೆ. ಗ್ರಂಥಾಲಯಗಳನ್ನು ಡಿಜಿಟಲೀಕರಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವ ಸಂಬಂಧ ತಗಲುವ ವೆಚ್ಚವನ್ನು ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹಿಸಲಾಗುವ ಗ್ರಂಥಾಲಯ ಉಪಕರದಿಂದ, 15ನೇ ಹಣಕಾಸು ಯೋಜನೆಯಿಂದ ಅಥವಾ ಗ್ರಾಮ ಪಂಚಾಯಿತಿ ಸ್ವಂತ ನಿಧಿಯಿಂದ ಭರಿಸುವಂತೆ ತಿಳಿಸಲಾಗಿರುತ್ತದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಂಥಾಲಯಗಳಲ್ಲಿ "ಓದುವ ಬೆಳಕು" ಕಾರ್ಯಕ್ರಮವನ್ನು ಅನುಷ್ಠಾನಿಸುವ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳನ್ನು ವಿವರಿಸಲಾಗಿರುತ್ತದೆ. ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ 6-18 ವಯಸ್ಸಿನ ಮಕ್ಕಳಿಗಾಗಿಯೇ ಆಯ್ಕೆ ಮಾಡಲಾದ ಪುಸ್ತಕಗಳನ್ನು ಪ್ರತ್ಯೇಕ ವಿಭಾಗಗಳನ್ನು ಇರಿಸುವುದು. ದಾನಿಗಳು, ಸ್ವಯಂ ಸೇವಾ ಸಂಸ್ಥೆಯವರು, ಕಾರ್ಪೊರೇಟ್ ಸಂಸ್ಥೆಯವರು ನೀಡುವ ಪುಸ್ತಕಗಳಿಂದ ಗ್ರಂಥಾಲಯಗಳನ್ನು ಪುನಶ್ಚೇತನಗೊಳಿಸುವುದು. ಗ್ರಾಮೀಣ ಪ್ರದೇಶದ 6-18 ವಯಸ್ಸಿನ ಮಕ್ಕಳನ್ನು ಗುರುತಿಸಿ ವಾರ್ಡ್/ಗ್ರಾಮವಾರು ವಿಂಗಡಿಸಿಕೊಂಡು ಸಮಯ ನಿಗಧಿಪಡಿಸಿ, ಮಕ್ಕಳ ನೋಂದಣಿ ಅಭಿಯಾನ ನಡೆಸುವುದು ಹಾಗೂ ಶೇಕಡ 100ರಷ್ಟು ಮಕ್ಕಳು ಉಚಿತವಾಗಿ ಗ್ರಂಥಾಲಯಗಳಲ್ಲಿ ನೋಂದಾಯಿಸಿಕೊಳ್ಳುವಂತೆ ಉಲ್ಲೇಖ(3)ರಲ್ಲಿ ತಿಳಿಸಲಾಗಿರುತ್ತದೆ.

**ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದ ಮೇಲ್ವಿಚಾರಕರುಗಳ ನೇಮಕಾತಿ ವಿಧಾನ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು,2022 ರನ್ವಯ ನೇಮಕಾತಿ ಪ್ರಕ್ರಿಯೆಯನ್ನು ಉಲ್ಲೇಖ(12)ರಲ್ಲಿ ತಿಳಿಸಿದಂತೆ ಕ್ರಮವಹಿಸುವುದು.

ನೇಮಕಾತಿ ಪ್ರಕ್ರಿಯೆಯು ಮುಗಿಯುವವರೆಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ(GPLF)ರಡಿ ನೊಂದಾಯಿತ ಸ್ವ-ಸಹಾಯ ಸಂಘ (SHG) ಗಳಿಂದ ತಾತ್ಕಾಲಿಕವಾಗಿ ಸೇವೆಯನ್ನು ಪಡೆಯಲು ಕ್ರಮವಹಿಸುವುದು.

ಗ್ರಾಮ ಪಂಚಾಯಿತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರಗಳನ್ನು ಪ್ರತ್ಯೇಕ ಖಾತೆ ತೆರೆದು ಸದರಿ ಖಾತೆಗೆ ಜಮಾ ಮಾಡಿ ಗ್ರಂಥಾಲಯ ನಿರ್ವಹಣೆಗಾಗಿ ಶೇಕಡ 10ರಷ್ಟನ್ನು ಗ್ರಾಮ ಪಂಚಾಯಿತಿಗಳು ಉಪಯೋಗಿಸುವಂತೆ ಉಲ್ಲೇಖ(6) ಮತ್ತು (7)ರಲ್ಲಿ ತಿಳಿಸಲಾಗಿರುತ್ತದೆ. ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹಿಸಲಾದ ಗ್ರಂಥಾಲಯ ಉಪಕರಗಳನ್ನು ಅಭಿವೃದ್ಧಿ ಜೊತೆಗೆ ಬಳಸಬಹುದಾದ ಇತರೆ ಉದ್ದೇಶಗಳ ಬಗ್ಗೆ ಸೂಚಿಸಲಾಗಿರುತ್ತದೆ ಹಾಗೂ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಕಡ್ಡಾಯವಾಗಿ ಇರಬೇಕಾದಂತಹ ಪುಸ್ತಕಗಳು/ಪತ್ರಿಕೆಗಳು/ಪೋಸ್ಟರ್‌ಗಳ ಬಗ್ಗೆ ತಿಳಿಸಲಾಗಿರುತ್ತದೆ.

ಗ್ರಾಮ ಪಂಚಾಯಿತಿ ವತಿಯಿಂದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸಾಮಾಜಿಕ ನ್ಯಾಯ ಸಮಿತಿಯ ಸದಸ್ಯರುಗಳು ನಿಯಮಿತವಾಗಿ ಗ್ರಂಥಾಲಯಕ್ಕೆ ಭೇಟಿ ನೀಡಿ ಗ್ರಂಥಾಲಯ ಮೇಲ್ವಿಚಾರಕರು ಹಾಗೂ ಓದುಗರೊಂದಿಗೆ ಸಮಾಲೋಚಿಸಿ ಅಲ್ಲಿನ ಕುಂದುಕೊರತೆಗಳ ಬಗ್ಗೆ ತಿಳಿದುಕೊಂಡು ಅವುಗಳನ್ನು ನಿವಾರಿಸಲು ಸಕಾರಾತ್ಮಕ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಗ್ರಾಮ ಪಂಚಾಯಿತಿ ಸಭೆಗಳಲ್ಲಿ ಹಾಗೂ ನಡೆಯುವ ತ್ರೈಮಾಸಿಕ ಕೆಡಿಪಿ ಸಭೆಗಳಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳುವಂತೆ ಉಲ್ಲೇಖ(10)ರಲ್ಲಿ ತಿಳಿಸಲಾಗಿರುತ್ತದೆ.

ಮೇಲಿನ ಅಂಶಗಳಲ್ಲಿ ಮತ್ತು ಉಲ್ಲೇಖಿತ ಆದೇಶ/ಮಾರ್ಗಸೂಚಿಗಳಲ್ಲಿ ತಿಳಿಸಿದಂತೆ 330 ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸುವ ಕುರಿತು ಹೊರಡಿಸಲಾಗಿರುವ ನಿಯಮಾವಳಿಗಳನ್ವಯ ಕ್ರಮ ವಹಿಸುವಂತೆ ಈ ಮೂಲಕ ತಿಳಿಸಿದೆ.

(ಉಮಾ ಮಹಾದೇವನ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು. (ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು. (ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು**:

1. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
2. ನಿರ್ದೇಶಕರು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
4. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಆಪ್ತ ಸಹಾಯಕರು,
5. ನಿರ್ದೇಶಕರು (ಇ-ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರುಮ ವೆಬ್ ಸೈಟ್‌ನಲಿ ಪ್ರಕಟಿಸಲು ಕ್ರಮವಹಿಸುವುದು.
6. ಕಛೇರಿ ಪ್ರತಿ.